# ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ-1/ಸಿಆರ್-15/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ.
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25-01-2022

## ಅಧಿಕೃತ ಜ್ಞಾಪನ

ವಿಷಯ : ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಬಿ ವೃಂದದ ವೇತನ ಶ್ರೇಣಿ ರೂ. 43,100-83,900 ರಡಿಯ ಸಹಾಯಕ ನಿರ್ದೇಶಕರು ಗ್ರೇಡ್-2/ ತತ್ಸಮಾನ ಹುದ್ದೆಯ ಅಧಿಕಾರಿಗಳ ಅಂತಿಮ ಜೇಷ್ಟತಾ ಪಟ್ಟಿಯನ್ನು ದಿನಾಂಕ: 01-01-2022 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ: ಈ ಕಛೇರಿ ಸಮಸಂಖ್ಯೆ ಅಧಿಕೃತ ಜ್ಞಾಪನ ದಿನಾಂಕ:03-01-2022

*********

ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಬಿ ವೃಂದದ ವೇತನ ಶ್ರೇಣಿ ರೂ. 43,100-83,900 ರಡಿಯ ಸಹಾಯಕ ನಿರ್ದೇಶಕರು ಗ್ರೇಡ್-2/ತತ್ಸಮಾ ನ ಹುದ್ದೆಯ ಅಧಿಕಾರಿಗಳ ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ಉಲ್ಲೇಖಿತ ಅಧಿಕೃತ ಜ್ಞಾಪನದನ್ವಯ ದಿನಾಂಕ:01-01-2022 ರಲ್ಲಿದ್ದಂತೆ ಪ್ರಕಟಿಸಿ, ದಿನಾಂಕ: 17-01-2022 ರವರೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅಧಿಕಾರಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ.

ತಾತ್ಕಾಲಿಕ ಜೇಷ್ಟತಾ ಪಟ್ಟಿಗೆ ನಿಗದಿತ ಅವಧಿಯೊಳಗೆ ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ತಿದ್ದುಪಡಿ ಮಾಡಿ ಅನುಬಂಧ-ಅ ರಲ್ಲಿ ಇರಿಸಿದೆ. ಮುಂದುವರೆದು ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಬಿ ವೃಂದದ ಸಹಾಯಕ ನಿರ್ದೇಶಕರು ಗ್ರೇಡ್-2/ತತ್ಸಮಾನ ಹುದ್ದೆಗೆ ಸಂಬಂಧಿಸಿದಂತೆ ಹುದ್ದೆಗಳ ವಾಸ್ತವಿಕ ಮಾಹಿತಿಯನ್ನು ಅನುಬಂಧ-1 ರ ಭಾಗ-1 ರಲ್ಲಿ ಹಾಗೂ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದದ ಅಧಿಕಾರಿಗಳ ಅಂತಿಮ ಜೇಷ್ಟತಾ ಪಟ್ಟಿಯನ್ನು ಅನುಬಂಧ-1 ರ ಭಾಗ-2 ರಲ್ಲಿ ದಿನಾಂಕ:01-01-2022 ರಲ್ಲಿದ್ದಂತೆ ಹೊರಡಿಸಲಾಗಿದೆ. ಸದರಿ ಅಂತಿಮ ಜೇಷ್ಟತಾ ಪಟ್ಟಿಯನ್ನು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್ **www.sw.kar.nic.in** ನಲ್ಲಿ ಪ್ರಕಟಿಸಲಾಗಿದೆ.

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ಮಹಾಲೇಖಪಾಲರು,(GE-CELL-II), ಹೊಸ ಕಟ್ಟಡ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ. ಬೆಂಗಳೂರು.

5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಎಲ್ಲಾ ಜಿಲ್ಲೆಗಳು.
7. ನಿರ್ದೇಶಕರು, ಡಾ:ಬಿ.ಆರ್ ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು.
8. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
9. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,
11. ಸಂಬಂಧಪಟ್ಟ ಸಹಾಯಕ ನಿರ್ದೇಶಕರಿಗೆ ಆಯಾ ಜಿಲ್ಲಾ ಮಟ್ಟದ ಅಧಿಕಾರಿಗಳ ಮೂಲಕ.
12. ಕಛೇರಿ ಪ್ರತಿ/ಇತರೆ.